ಗಣಕ ಶಾಖೆಗೆ
45 ① 12/3/2020

ಕರ್ನಾಟಕ ವಿಧಾನ ಪರಿಷತ್ತು

1	ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	944
2	ಸದಸ್ಯರ ಹೆಸರು	:	ಶ್ರೀ ಅರವಿಂದ ಕುಮಾರ್ ಅರಳಿ.
3	ಉತ್ತರಿಸಬೇಕಾದ ದಿನಾಂಕ	:	12.03.2020
4	ಉತ್ತರಿಸುವವರು	:	ಸಣ್ಣ ನೀರಾವರಿ ಸಚಿವರು

ಕ್ರ.ಸಂ	ಪ್ರಶ್ನೆಗಳು	ಉತ್ತರಗಳು
ಅ)	ಬೀದರ್ ಜಿಲ್ಲೆಯಲ್ಲಿ ಎಷ್ಟು ಕೆರೆಗಳಿವೆ; ಅವುಗಳಲ್ಲಿ ಎಷ್ಟು ಕೆರೆಗಳಿಂದ ಹೂಳೆತ್ತಲಾಗಿದೆ; ಮತ್ತು ಎಷ್ಟು ಕೆರೆಗಳಲ್ಲಿ ನೀರು ಸಂಗ್ರಹಿಸುವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ; ಇನ್ನೂ ಮಾಡದೆ ಇರುವ ಕೆರೆಗಳಲ್ಲಿ ನೀರು ತುಂಬಿಸುವ ಯೋಜನೆಗಳೇನಾದರೂ ಸರ್ಕಾರದ ಮುಂದಿದೆಯೆ: ಇದ್ದಲ್ಲಿ ಅವು ಯಾವುವು?	ಬೀದರ್ ಜಿಲ್ಲೆಯ ಸಣ್ಣ ನೀರಾವರಿ ಇಲಾಖೆಯ ವ್ಯಾಪ್ತಿಯಲ್ಲಿ ಒಟ್ಟು 125 ಕೆರೆಗಳಿವೆ. ಇವುಗಳಲ್ಲಿ 56 ಕೆರೆಗಳನ್ನು ವಿವಿಧ ಲೆಕ್ಕಶೀರ್ಷಿಕೆಯಡಿ ಅಭಿವೃದ್ಧಿ ಪಡಿಸಲು ಕೈಗೆತ್ತಿಕೊಳ್ಳಲಾಗಿದೆ. ಇವುಗಳಲ್ಲಿ ಒಟ್ಟು 15 ಕೆರೆಗಳ ಅಂಗಳದಿಂದ ಹೂಳನ್ನು ತೆಗೆಯಲಾಗಿದೆ. ಸಣ್ಣ ನೀರಾವರಿ ಇಲಾಖೆಯಿಂದ ಯಾವುದೇ ಕೆರೆಗಳಿಗೆ ನೀರು ತುಂಬಿಸುವ ಯೋಜನೆಗಳನ್ನು ಹಮ್ಮಿಕೊಳ್ಳಲಾಗಿರುವುದಿಲ್ಲ. ಜಲಸಂಪನ್ಮೂಲ ಇಲಾಖೆಯಿಂದ ಬಸವಕಲ್ಯಾಣ ತಾಲ್ಲೂಕಿನ 7 ಕೆರೆಗಳನ್ನು ಮಾಂಜ್ರಾ ನದಿಗೆ ನಿರ್ಮಿಸಿದ ಕೊಂಗಳಿ ಬ್ಯಾರೇಜ್‌ನಿಂದ ನೀರು ತುಂಬಿಸುವ ಕಾಮಗಾರಿಯನ್ನು ಕೈಗೊಳ್ಳಲಾಗುತ್ತಿದೆ ಹಾಗೂ ಬೀದರ್ ತಾಲ್ಲೂಕಿನ 27 ಮತ್ತು ಭಾಲ್ಕಿ ತಾಲ್ಲೂಕಿನ 6 ಕೆರೆಗಳನ್ನು ಮಾಂಜ್ರಾ ನದಿಗೆ ನಿರ್ಮಿಸಿರುವ ಚಂದಾಪುರ ಬ್ಯಾರೇಜ್‌ನಿಂದ ನೀರು ತುಂಬಿಸಲು ಡಿ.ಪಿ.ಆರ್. ಸಿದ್ಧಪಡಿಸಲಾಗುತ್ತಿದೆ.

ಕಡತ ಸಂಖ್ಯೆ: MID 15 LCQ 2020

(signature)

(ಜೆ.ಸಿ.ಮಾಧುಸ್ವಾಮಿ)
ಕಾನೂನು, ಸಂಸದೀಯ ವ್ಯವಹಾರಗಳು ಮತ್ತು
ಶಾಸನ ರಚನೆ ಹಾಗೂ ಸಣ್ಣ ನೀರಾವರಿ ಸಚಿವರು